**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 2768
ಸದಸ್ಯರ ಹೆಸರು : ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 28-03-2022
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 3 ವರ್ಷಗಳಲ್ಲಿ ನಡೆದ ಪಿ.ಯು.ಸಿ ಪರೀಕ್ಷೆಯಲ್ಲಿ ಅಸಮರ್ಪಕ ಮೌಲ್ಯಮಾಪನ ಮಾಡಿದ ಮೌಲ್ಯಮಾಪಕರಿಂದ ವಸೂಲು ಮಾಡಿದ ದಂಡದ ಮೊತ್ತವೆಷ್ಟು; ಹಾಗೂ ಇನ್ನೂ ಎಷ್ಟು ದಂಡದ ಮೊತ್ತವನ್ನು ವಸೂಲು ಮಾಡಬೇಕಾಗಿದೆ; ಯಾವಾಗ ವಸೂಲು ಮಾಡಲಾಗುವುದು; (ವರ್ಷವಾರು ವಿವರ ನೀಡುವುದು) | **2018-19** ಸಾಲಿನಲ್ಲಿ ಅಸಮರ್ಪಕ ಮೌಲ್ಯಮಾಪನ ಮಾಡಿದ ಮೌಲ್ಯಮಾಪಕರಿಂದ ಯಾವುದೇ ದಂಡ ವಸೂಲಿ ಮಾಡಿರುವುದಿಲ್ಲ.<br><br>**2019-20**ನೇ ಸಾಲಿನಲ್ಲಿ ಅಸಮರ್ಪಕ ಮೌಲ್ಯಮಾಪನ ಮಾಡಿದ ನಾಲ್ಕು ಮಂದಿ ಮೌಲ್ಯಮಾಪಕರಿಂದ ಒಟ್ಟು ರೂ.400/-ಗಳ ದಂಡವನ್ನು ವಿಶೇಷ ಪ್ರಕರಣದಡಿ ವಸೂಲಿ ಮಾಡಲಾಗಿದೆ.<br><br>**2020-21**ನೇ ಸಾಲಿನಲ್ಲಿ ಕೋವಿಡ್-19ರ ಹಿನ್ನೆಲೆಯಲ್ಲಿ ವಾರ್ಷಿಕ ಪರೀಕ್ಷೆ ನಡೆದಿರುವುದಿಲ್ಲ. ಆದರೆ ಖಾಸಗಿ ಅಭ್ಯರ್ಥಿಗಳು ಮತ್ತು ಸರ್ಕಾರಿ ಆದೇಶದನ್ವಯ ಫಲಿತಾಂಶ ಪ್ರಕಟಿಸಿದ ನಂತರ ಫಲಿತಾಂಶವನ್ನು ಒಪ್ಪದೇ ಇದ್ದಂತಹ ವಿದ್ಯಾರ್ಥಿಗಳಿಗೆ ಮಾತ್ರ ಪರೀಕ್ಷೆಯನ್ನು ನಡೆಸಲಾಗಿದೆ. ಈ ಸಾಲಿನಲ್ಲಿಯೂ ಅಸಮರ್ಪಕ ಮೌಲ್ಯಮಾಪನ ಮಾಡಿದ ಮೌಲ್ಯಮಾಪಕರಿಂದ ಯಾವುದೇ ದಂಡ ವಸೂಲಿ ಮಾಡಿರುವುದಿಲ್ಲ.<br><br>2021-22ನೇ ಸಾಲಿನಿಂದ ಇಂತಹ ಪ್ರಕರಣಗಳಿಗೆ ದಂಡ ವಸೂಲು ಮಾಡಲಾಗುವುದು. |
| ಆ) | ಅಸಮರ್ಪಕ ಮೌಲ್ಯ ಮಾಪನ ಮಾಡಿದ ಕಾರಣ ವಿನಾಕಾರಣ ತೊಂದರೆಗೆ ಒಳಗಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಆ ವಿದ್ಯಾರ್ಥಿಗಳಿಗೆ ಯಾವ ರೀತಿಯ ಪರಿಹಾರ ನೀಡಲಾಗಿದೆ; (ವ್ಯತ್ಯಾಸದ ಅಂಕಗಳೊಂದಿಗೆ ವರ್ಷವಾರು ವಿವರ ನೀಡುವುದು) | ಕಳೆದ ಮೂರು ವರ್ಷಗಳಲ್ಲಿ ಅಸಮರ್ಪಕ ಮೌಲ್ಯಮಾಪನದಿಂದ ತೊಂದರೆಗೆ ಒಳಗಾದ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ: 2,777.<br><br>ಸದರಿ ವಿದ್ಯಾರ್ಥಿಗಳಿಗೆ ಉತ್ತರ ಪತ್ರಿಕೆಗಳ ಸ್ಕ್ಯಾನ್ಡ್ ಪ್ರತಿ ನೀಡಿ, ಮರು ಎಣಿಕೆ ಮತ್ತು ಮರು ಮೌಲ್ಯಮಾಪನದ ಮೂಲಕ ಶೇಕಡ 6 ಅಥವಾ ಶೇಕಡ 6 ಕ್ಕಿಂತ ಹೆಚ್ಚು ಅಂಕಗಳ ವ್ಯತ್ಯಾಸವಾದಲ್ಲಿ ಸಂಬಂಧಿಸಿದ ವಿದ್ಯಾರ್ಥಿಗಳಿಗೆ ಪಾವತಿಸಿದ ಹಣವನ್ನು ಪಡೆದ ಅಂಕಗಳೊಂದಿಗೆ ನೀಡಿ ನ್ಯಾಯ ಒದಗಿಸಲಾಗುತ್ತಿದೆ.<br><br>ಕಳೆದ ಮೂರು ವರ್ಷಗಳಲ್ಲಿ ಮರು ಮೌಲ್ಯಮಾಪನದಲ್ಲಿ ಶೇಕಡ 6 ಅಥವಾ ಶೇಕಡ 6 ಕ್ಕಿಂತ ಹೆಚ್ಚು ಅಂಕಗಳ ಹಾಗೂ ಶೇಕಡ 6 ಅಥವಾ ಶೇಕಡ 6 ಕ್ಕಿಂತ ಕಡಿಮೆ ಅಂಕಗಳ ವ್ಯತ್ಯಾಸವಾದ ಒಟ್ಟು ವಿದ್ಯಾರ್ಥಿಗಳ ಪಟ್ಟಿ ಈ ಕೆಳಕಂಡಂತಿದೆ:- |

**REVALUATION CHANGES**

| YEAR | DIFFERENCE | COUNT |
|---|---|---|
| 2019 | >=+6 | 1008 |
| | <=-6 | 66 |
| 2020 | >=+6 | 1540 |
| | <=-6 | 124 |
| 2021 | >=+6 | 31 |
| | <=-6 | 8 |

| | | |
|---|---|---|
| ಇ) | ಅಸಮರ್ಪಕ ಮೌಲ್ಯಮಾಪನ ಮಾಡಿದ ಕಾರಣ ಕಡಿಮೆ ಅಂಕ ಬಂದ ಕಾರಣಕ್ಕಾಗಿ ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡರೆ ಇದಕ್ಕೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗುತ್ತದೆ; ಅಸಮರ್ಪಕ ಮೌಲ್ಯಮಾಪನ ಮಾಡಿದವರ ಮೇಲೆ ಕ್ರಿಮಿನಲ್ ಕೇಸು ದಾಖಲಿಸುವ ಕುರಿತು ಸರ್ಕಾರದ ನಿಲುವೇನು? | ಇಂತಹ ಪ್ರಕರಣಗಳು ಕಳೆದ ಮೂರು ವರ್ಷಗಳಲ್ಲಿ ಯಾವುದೂ ದಾಖಲಾಗಿರುವುದಿಲ್ಲ ಅಲ್ಲದೇ ಅಸಮರ್ಪಕ ಮೌಲ್ಯಮಾಪನ ಮಾಡಿದವರ ಮೇಲೆ ಕ್ರಿಮಿನಲ್ ಕೇಸು ದಾಖಲಿಸುವ ಬಗ್ಗೆ ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |

**ಸಂಖ್ಯೆ: ಇಪಿ 64 ಡಿಜಿಡಬ್ಲ್ಯೂ 2022**

(ಬಿ.ಸಿ. ನಾಗೇಶ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು